# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1435 (1654)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಕೃಷಿ ಸಚಿವರು

ವಿಷಯ : ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಕೃಷಿ ಕಾಯ್ದೆ ಕುರಿತು ಮಾಹಿತಿ

(ಅ) ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ಮೂರು ಕೃಷಿ ಕಾಯ್ದೆಗಳಿಗೆ ಸಂಬಂಧಿಸಿದಂತೆ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 148/2020ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಮಧ್ಯಂತರ ಆದೇಶವನ್ನು ಹೊರಡಿಸಿರುವಂತೆ ತೀರ್ಪು ನೀಡಿದ್ದು ರಾಜ್ಯ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು;

(ಆ) ಇದಕ್ಕೆ ಸಂಬಂಧಿಸಿದಂತೆ ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ, 1966ರ ಕಲಂ 8&117ರನ್ವಯ ಕಾರ್ಯ ನಿರ್ವಹಿಸಲು ಅವಕಾಶವಿದೆಯೇ; ಅವಕಾಶವಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು;

(ಇ) ರಾಜ್ಯದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಹಿಂದಿನಂತೆಯೇ ಮುಖ್ಯ ಮಾರುಕಟ್ಟೆ ಪ್ರಾಂಗಣಗಳು/ಉಪಮಾರುಕಟ್ಟೆ ಪ್ರಾಂಗಣಗಳು/ಮಾರುಕಟ್ಟೆ ಉಪ ಪ್ರಾಂಗಣಗಳ ಒಳಗೆ ಹಾಗೂ ಹೊರಗಡೆ ಮಾರುಕಟ್ಟೆ ಶುಲ್ಕ ವಸೂಲಾತಿಗೆ ಅವಕಾಶವಿದೆಯೇ; ಅವಕಾಶವಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮಗಳೇನು?